## ಪತ್ರಿಕಾ ಟಿಪ್ಪಣಿ

**2024-25ನೇ ಶೈಕ್ಷಣಿಕ ಸಾಲಿನಿಂದ ಪದವಿ ಕಾರ್ಯಕ್ರಮಗಳಿಗೆ ಸಂಬಂಧಪಟ್ಟಂತೆ ರಾಜ್ಯ ಶಿಕ್ಷಣ ನೀತಿ ಆಯೋಗವು ನೀಡಿರುವ ಮಧ್ಯಂತರ ವರದಿಗಳ ಶಿಫಾರಸ್ಸುಗಳಂತೆ ಪದವಿ ಅವಧಿ ಹಾಗೂ ಪಠ್ಯಕ್ರಮ ರಚನೆಗೆ ಸಂಬಂಧಪಟ್ಟಂತೆ ಸರ್ಕಾರದ ಆದೇಶ.**

**ಪೀಠಿಕೆ**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಯುಎನ್ಇ 2023, ದಿನಾಂಕ: 11.10.2023ರನ್ವಯ ರಾಜ್ಯವು ಪ್ರೊ.ಸುಖದೇವ್ ಥೋರಟ್ ರವರ ಅಧ್ಯಕ್ಷತೆಯಲ್ಲಿ ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ರಚಿಸಿದೆ.

2. ರಾಜ್ಯದ ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣವನ್ನು ಸೂಕ್ಷ್ಮವಾಗಿ ಪರಾಮರ್ಶಿಸಿ ಶಿಕ್ಷಣ ನೀತಿಯನ್ನು ರೂಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಈ ಆಯೋಗವು ರಚಿಸಿರುತ್ತದೆ. ಸದರಿ ನೀತಿಯು ರಾಜ್ಯದ ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣದಲ್ಲಿ ನೋಂದಣಿಯನ್ನು ವೃದ್ಧಿಸಲು, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು, ಪ್ರತಿಯೊಬ್ಬರಿಗೂ ಗುಣಾತ್ಮಕ ಶಿಕ್ಷಣದಲ್ಲಿ ಸಮಾನ ಅವಕಾಶ ಕಲ್ಪಿಸಲು, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಜ್ಞಾನವನ್ನು ಸದೃಢಗೊಳಿಸಲು, ಶಾಲಾ ಹಾಗೂ ಉನ್ನತ ಶಿಕ್ಷಣವನ್ನು ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶವನ್ನು ಕಲ್ಪಿಸಲು ಮತ್ತು ಪ್ರಜಾಸತ್ತಾತ್ಮಕ ಮತ್ತು ನಾಗರೀಕ/ನೈತಿಕ ಮೌಲ್ಯಗಳನ್ನು ಬೆಳೆಸುವ ಗುರಿ ಹೊಂದಿದೆ.

3. ಸದರಿ ಆಯೋಗವು ಆಗಸ್ಟ್, 2024ರಲ್ಲಿ ಅಂತಿಮ ವರದಿಯನ್ನು ಸಲ್ಲಿಸಲಿದ್ದು, ಪ್ರಸ್ತುತ ಕೆಲವು ಶಿಫಾರಸ್ಸುಗಳೊಂದಿಗೆ ಮಧ್ಯಂತರ ವರದಿಯನ್ನು ಸಲ್ಲಿಸಿರುತ್ತದೆ. ಸರ್ಕಾರವು ಆಗಸ್ಟ್, 2021ರಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಕ್ಕಾಗಿ ಆದೇಶವನ್ನು ಹೊರಡಿಸಿತ್ತು. ರಾಜ್ಯ ಶಿಕ್ಷಣ ನೀತಿ ಆಯೋಗದ ಮಧ್ಯಂತರ ವರದಿಯ ಶಿಫಾರಸ್ಸುಗಳ ಆಧಾರದ ಮೇಲೆ ಪದವಿ ಅವಧಿ ಮತ್ತು ಪಠ್ಯಕ್ರಮ ರಚನೆಯಲ್ಲಿ ಕೆಲವೊಂದು ಮಾರ್ಪಾಡುಗಳನ್ನು ಸೂಚಿಸಿರುತ್ತದೆ. ಅದರಂತೆ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಇಡಿ 166 ಯುಎನ್ಇ 2023, ದಿನಾಂಕ: 08.05.2024 ಅನ್ನು ಹೊರಡಿಸಿದೆ.

4. ರಾಜ್ಯದಲ್ಲಿ 2024-25ನೇ ಶೈಕ್ಷಣಿಕ ಸಾಲಿನ ಪದವಿ ಕೋರ್ಸ್‌ಗಳಿಗೆ ಸಂಯೋಜನೆ ಹಾಗೂ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಯಾವುದೇ ವಿಳಂಬವಿಲ್ಲದೆ ಈ ಪ್ರಕ್ರಿಯೆಯನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಲಾಗುವುದು. 2024-25ರ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ ಕೆಳಕಂಡಂತೆ ಕೆಲವು ಬದಲಾವಣೆಗಳನ್ನು ಪ್ರಸ್ತಾಪಿಸಲಾಗಿದೆ.

5. ಥೋರಟ್ ಸಮಿತಿಯು ವಿಸ್ತೃತವಾದ ಸಾರ್ವಜನಿಕ ಸಂವಾದವನ್ನು 3 ತಿಂಗಳ ಕಾಲ ನಡೆಸಿರುತ್ತದೆ. ನವೆಂಬರ್ 2023ರಲ್ಲಿ ವಿವಿಧ ವಿಶ್ವವಿದ್ಯಾಲಯಗಳ ಉಪಕುಲಪತಿಗಳು, ಡೀನರು ಮತ್ತು ಅಧ್ಯಯನ ಮಂಡಳಿಗಳ ಮುಖ್ಯಸ್ಥರೊಂದಿಗೆ ಹಾಗೂ ವಿವಿಧ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ಸಮಾಲೋಚನಾ ಸಭೆಗಳನ್ನು ನಡೆಸಲಾಯಿತು. ಡಿಸೆಂಬರ್ 2023ರಲ್ಲಿ ಕರ್ನಾಟಕದ ನಾಲ್ಕು ಕಂದಾಯ ವಿಭಾಗಗಳ ನಾನಾ ಪಾಲುದಾರರೊಂದಿಗೆ ಪ್ರಾದೇಶಿಕ ಸಭೆಗಳನ್ನು ನಡೆಸಲಾಯಿತು. ಈ ಸಭೆಗಳಲ್ಲಿ ಭಾಗವಹಿಸಿದ ಪಾಲುದಾರರಲ್ಲಿ ಉಪಕುಲಪತಿಗಳು ಅಥವಾ ಅವರ ಪ್ರತಿನಿಧಿಗಳು, ಪ್ರಾಂಶುಪಾಲರು, ಕಾಲೇಜು ಅಧ್ಯಾಪಕರು, ಕಾಲೇಜು ಅಧ್ಯಾಪಕರ ಸಂಘಗಳ ಪ್ರತಿನಿಧಿಗಳು, ವಿದ್ಯಾರ್ಥಿಸಂಘಗಳ ಪ್ರತಿನಿಧಿಗಳು ಮತ್ತು ಆಯಾ ಕ್ಷೇತ್ರದ ಶಿಕ್ಷಣ ತಜ್ಞರು ಸೇರಿದ್ದರು. ಮುಂದುವರೆದು, ಒಂದು ಆನ್‌ಲೈನ್ ಸಮೀಕ್ಷೆಯನ್ನೂ ನಡೆಸಲಾಯಿತು. ಇದಕ್ಕೆ ಸ್ಪಂದಿಸಿದವರಲ್ಲಿ ಮೆಟ್ರೊಪಾಲಿಟನ್ ನಗರಗಳ ಮತ್ತು ಸಣ್ಣ ಪಟ್ಟಣಗಳ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳ ಪ್ರತಿನಿಧಿಗಳಿದ್ದರು. ನಂತರ, ಜನವರಿ 2024ರಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಶಿಕ್ಷಣ ತಜ್ಞರು ಹಾಗೂ ಮಾಜಿ ಉಪಕುಲಪತಿಗಳ ಸಂಘದ ಪ್ರತಿನಿಧಿಗಳೊಂದಿಗೆ ಬೆಂಗಳೂರಿನಲ್ಲಿ ಎರಡು ಸುತ್ತುಗಳ ಸಮಾಲೋಚನೆಯನ್ನು ನಡೆಸಲಾಯಿತು.

CS CamScanner

6. ಮಧ್ಯಂತರ ವರದಿಯಲ್ಲಿನ ಮುಖ್ಯ ಶಿಫಾರಸ್ಸುಗಳು ಈ ಕೆಳಕಂಡ ಅಂಶಗಳಿಗೆ ಸಂಬಂಧಪಟ್ಟವುಗಳಾಗಿರುತ್ತವೆ:

ಅ. ಸ್ನಾತಕ ಪದವಿಯ ಅವಧಿ (3 ವರ್ಷ ಅಥವಾ 4 ವರ್ಷ)
ಆ. ಪಠ್ಯಕ್ರಮದ ರಚನೆ ಮತ್ತು ಬಹು ಶಿಸ್ತೀಯ ಪಠ್ಯಕ್ರಮ (2024-25 ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್ ಗಳಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ)
ಇ. ಸರ್ಟಿಫಿಕೇಟ್ (1 ವರ್ಷದ ನಂತರ) ಮತ್ತು ಡಿಪ್ಲೊಮಾ (2 ವರ್ಷಗಳ ನಂತರ) ಜೊತೆ ಬಹು ಆಗಮನ-ನಿರ್ಗಮನ ಆಯ್ಕೆ

7. ಈ ಶಿಫಾರಸ್ಸುಗಳು ಐತಿಹಾಸಿಕ ಅನುಭವ, ವಿದ್ಯಾರ್ಥಿಗಳ ಸರ್ವತೋಮುಖ ಹಿತಾಸಕ್ತಿಯ ನಿಯಮಗಳು, ವಿವಿಧ ಸಮಾಜೋ ಆರ್ಥಿಕ ಹಿನ್ನೆಲೆಗಳುಳ್ಳ ವಿದ್ಯಾರ್ಥಿಗಳಿಗೆ ನಿಷ್ಪಕ್ಷಪಾತತೆ, ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಅವಲಂಬಿಸಿದೆ. ಸ್ನಾತಕ ಪದವಿಯ ಸ್ವರೂಪ ಮತ್ತು ಅವಧಿಯಲ್ಲಿ 4 ವರ್ಷ ಕಾಲಾವಧಿಗೆ ಬದಲಾವಣೆಗಳ ಉದ್ದೇಶ, ವಿದೇಶಗಳಲ್ಲಿ ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಪದವಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಪ್ರಕ್ರಿಯೆಯನ್ನು ಸುಗಮಗೊಳಿಸಲು ಜಾಗತಿಕ ಶೈಕ್ಷಣಿಕ ಪದ್ಧತಿಗಳೊಂದಿಗೆ, ವಿಶೇಷವಾಗಿ ಅಮೇರಿಕಾದ ಶೈಕ್ಷಣಿಕ ಪದ್ಧತಿಯೊಂದಿಗೆ ಸಾಮ್ಯತೆಯನ್ನು ಸಾಧಿಸುವುದೇ ಆಗಿದೆ ಎಂದು ಸಮಿತಿಯು ಅಭಿಪ್ರಾಯಪಟ್ಟಿದೆ. ಸ್ನಾತಕ ಪದವಿಯ ಕಾಲಾವಧಿಯನ್ನು 4 ವರ್ಷಗಳಿಗೆ ನಿಗದಿ ಮಾಡಿದಲ್ಲಿ ಬಡ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮೊದಲಾದ ಸಾಮಾಜಿಕವಾಗಿ ಹಿಂದುಳಿದಿರುವ, ಮಹಿಳಾ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸ್ನಾತಕ ಕೋರ್ಸ್‌ಗಳಿಗೆ ಲಭ್ಯತೆಯನ್ನು ತಗ್ಗಿಸುತ್ತದೆ. ಜೊತೆಗೆ ಕಾಲೇಜುಗಳಲ್ಲಿ 4 ವರ್ಷಗಳ ಪದವಿ ಕಾರ್ಯಕ್ರಮವನ್ನು ಪ್ರಾರಂಭಿಸಲು ಭೌತಿಕ ಸಂಪನ್ಮೂಲಗಳ ಮತ್ತು ಸಿಬ್ಬಂದಿ ಕೊರತೆ ಮತ್ತು ಇತರ ಸೌಲಭ್ಯಗಳ ಅಲಭ್ಯತೆ ಮುಖ್ಯ ಕಾರಣ ಎಂದು ಉಲ್ಲೇಖಿಸಲಾಗಿದೆ.

8. ಮುಂದುವರೆದು, ಪಠ್ಯಕ್ರಮ ರಚನೆಗೆ ಸಂಬಂಧಿಸಿದಂತೆ, ಮೂರು ಪರಸ್ಪರ ಸಂಬಂಧವುಳ್ಳ ಮುಖ್ಯ ಶಿಸ್ತುಗಳ ಬದಲಾಗಿ (Discipline) ಎರಡು ಪರಸ್ಪರ ಸಂಬಂಧಪಡದ ಮೇಜರ್ ಶಿಸ್ತುಗಳನ್ನು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದ ಕಾರಣ ವಿದ್ಯಾರ್ಥಿಗಳು ಪದವಿ ಕೋರ್ಸ್ ಪೂರ್ಣಗೊಳಿಸದೇ ವಿಮುಖರಾಗಬಹುದು ಹಾಗೂ ಮೂರು ಮೇಜರ್ ಪದ್ಧತಿಗೆ ಹೋಲಿಸಿದರೆ ಎರಡು ಮೇಜರ್ ಶಿಸ್ತಿಗೆ ನೀಡಿರುವ ಕ್ರೆಡಿಟ್ ಗಳು ಕಡಿಮೆ ಇರುವ ಕಾರಣ ಮೂರು ಮೇಜರ್ ಪದ್ಧತಿಗೆ ಪ್ರಾಶಸ್ತ್ಯ ನೀಡುವುದು.

**2024-25ನೇ ಶೈಕ್ಷಣಿಕ ವರ್ಷಕ್ಕೆ ಕಾಲಾವಧಿ ಮತ್ತು ಪಠ್ಯಕ್ರಮದಲ್ಲಿ ಪ್ರಸ್ತಾಪಿಸಲಾಗಿರುವ ಬದಲಾವಣೆಗಳು:**

9. ಆಯೋಗದ ಮಧ್ಯಂತರ ವರದಿಯ ಶಿಫಾರಸ್ಸುಗಳನ್ನು ಆಧರಿಸಿ, ಸರ್ಕಾರವು ಉನ್ನತ ಶಿಕ್ಷಣದ ಪದವಿ ಕಾರ್ಯಕ್ರಮದಲ್ಲಿ ಮತ್ತು ಎಲ್ಲ ಸಾರ್ವಜನಿಕ ವಿಶ್ವವಿದ್ಯಾಲಯಗಳ ಹಾಗೂ ಸಂಯೋಜಿತ ಕಾಲೇಜುಗಳ ಪಠ್ಯಕ್ರಮದಲ್ಲಿ ಕೆಳಕಂಡ ಬದಲಾವಣೆಗಳನ್ನು ತರಲು ಉದ್ದೇಶಿಸಿದೆ. ಈ ಬದಲಾವಣೆಗಳ ವಿವರಗಳು ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಯುಎನ್‌ಇ 2023, ದಿನಾಂಕ: 08-05-2024 ರಲ್ಲಿವೆ.

i. ಪದವಿ ಕಾರ್ಯಕ್ರಮದ ಕಾಲಾವಧಿ: ಸ್ನಾತಕ ಪದವಿ ಕಾರ್ಯಕ್ರಮದ ಕಾಲಾವಧಿ ಕೇವಲ ಮೂರು ವರ್ಷಗಳು ಮಾತ್ರ ಆಗಿದ್ದು, ನಾಲ್ಕು ವರ್ಷದ ಪದವಿ ಕಾರ್ಯಕ್ರಮವನ್ನು ಪ್ರಾರಂಭಿಸುವ ಆಯ್ಕೆ ಇರುವುದಿಲ್ಲ. ಈ ಮೊದಲು ನಾಲ್ಕು ವರ್ಷದ ಪದವಿಯು ಆಯ್ಕೆಯಾಗಿತ್ತು.

ii. ಮೂರು ವರ್ಷಗಳ ಪದವಿ ಕಾರ್ಯಕ್ರಮಕ್ಕೆ ಪಠ್ಯಕ್ರಮದ ಸ್ವರೂಪ: ಮೂರು ಬೇರೆಬೇರೆ ಪದವಿ ಪಠ್ಯಕ್ರಮದ ಚೌಕಟ್ಟುಗಳನ್ನು (CFW) ಪ್ರಸ್ತಾಪಿಸಿ ಅಂಗೀಕರಿಸಲಾಗಿದ್ದು, ಅವು ಈ ಕೆಳಗಿನಂತಿವೆ:

CamScanner

a. ಎಲ್ಲ 6 ಸೆಮಿಸ್ಟರ್‌ಗಳಲ್ಲಿ 3 ಮೇಜರ್‌ಗಳೊಡನೆ ಸಾಮಾನ್ಯ ಪದವಿ, ಅಥವಾ
b. 4ನೇ ಸೆಮಿಸ್ಟರ್ ವರೆಗೆ 3 ಮೇಜರ್ ಗಳು ಮತ್ತು 5 ಹಾಗೂ 6ನೇ ಸೆಮಿಸ್ಟರ್ ಗಳಲ್ಲಿ 1 Subject ನಲ್ಲಿ ವಿಶೇಷಜ್ಞತೆ (Specialization).
c. ಮೊದಲನೇ ಸೆಮಿಸ್ಟರ್ ನಿಂದ ಮೈನರ್ Subject ಗಳ ಜೊತೆಗೆ 1 Subject ನಲ್ಲಿ ವಿಶೇಷಜ್ಞತೆ (Specialization) (ಉದಾ: ಬಿ.ಕಾಂ, ಬಿಬಿಎ, ಬಿಸಿಎ, ಬಿಎ/ಬಿಎಸ್ಸಿ.) ಪಠ್ಯಕ್ರಮದ ವಿವರಗಳನ್ನು ಲಗತ್ತಿಸಲಾಗಿದೆ.

iii. ಬಹು ಆಗಮನ/ನಿರ್ಗಮನ- ಮೊದಲನೇ ವರ್ಷದ ನಂತರ ಸರ್ಟಿಫಿಕೇಟ್ ನೀಡುವ ಹಾಗೂ ಎರಡನೇ ವರ್ಷದ ನಂತರ ಡಿಪ್ಲೊಮಾ ನೀಡುವ (ಬಹು ಆಗಮನ/ನಿರ್ಗಮನ) ಕುರಿತು, ಅಂತಿಮ ವರದಿ ಸಲ್ಲಿಕೆಯಾದ ನಂತರ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಕುರಿತು ಸರ್ಕಾರ ತೀರ್ಮಾನ ಕೈಗೊಳ್ಳುತ್ತದೆ. ಆದರೆ ಈ ಹಂತದಲ್ಲಲ್ಲ.

iv. ಪಠ್ಯಕ್ರಮ ರಚನೆಯಲ್ಲಿನ ಬದಲಾವಣೆಯ ಮೂಲಕ ಆಳವಾದ ಜ್ಞಾನ, ಔದ್ಯಮಿಕ ಆಧಾರಿತ ಕೋರ್ಸ್‌ಗಳನ್ನು ಮತ್ತು ಪ್ರಾದೇಶಿಕ ನಿರ್ದಿಷ್ಟ ವಿಷಯಗಳನ್ನು ವಿಶ್ವವಿದ್ಯಾಲಯಗಳ ಅಧ್ಯಯನ ಮಂಡಳಿಗೆ ಸ್ವಾಯತ್ತತೆಯನ್ನು ನೀಡುವುದನ್ನು ಕೇಂದ್ರೀಕರಿಸಲಾಗಿದೆ. Apprenticeship-embedded degree courses ಗಳನ್ನು ಸಹ ಪಠ್ಯಕ್ರಮದ ಭಾಗವಾಗಿ ಪರಿಗಣಿಸಲಾಗಿದೆ.

**ಪ್ರಸ್ತುತ ಚಾಲ್ತಿಯಲ್ಲಿರುವ ತಂಡಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ**

10. ಈ ಬದಲಾವಣೆಗಳು 2021-22, 2022-23, 2023-24 ನೇ ವರ್ಷಗಳಲ್ಲಿ ಪ್ರವೇಶಾತಿ ಪಡೆದ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಪದವಿ ಕಾರ್ಯಕ್ರಮಗಳಿಗೆ 2021-22, 2022-23 ಮತ್ತು 2023-24 ನೇ ಶೈಕ್ಷಣಿಕ ವರ್ಷಗಳಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳು ಕಾಲಾವಧಿ ಹಾಗೂ ಪಠ್ಯಕ್ರಮದ ಕುರಿತು ಸದ್ಯಕ್ಕೆ ಜಾರಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019 (ಭಾಗ-1), ದಿನಾಂಕ: 07-08-2021ರ ಅನುಸಾರವಾಗಿಯೇ ವಿದ್ಯಾಭ್ಯಾಸ ಮಾಡುತ್ತಾರೆ.
11. ಘೋಷಣೆ ಮಾಡಲ್ಪಟ್ಟಿರುವ ಬದಲಾವಣೆಗಳು ಶೈಕ್ಷಣಿಕ ವರ್ಷ 2024-25ರಿಂದ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

**2024-25ನೇ ಸಾಲಿನ ಸಂಯೋಜನೆ ಮತ್ತು ಪ್ರವೇಶಾತಿ ಪ್ರಕ್ರಿಯೆಗಳು**

12. ವಿಶ್ವವಿದ್ಯಾಲಯಗಳಿಗೆ ಸಂಯೋಜನಾ ಪ್ರಕ್ರಿಯೆ ಮತ್ತು ಪ್ರವೇಶಾತಿಗಳು ಈ ಕೂಡಲೇ ಪ್ರಾರಂಭಗೊಳ್ಳುತ್ತವೆ. ಸರ್ಕಾರದ ಆದೇಶದಂತೆ ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ. ಈ ಕುರಿತು ಈಗಾಗಲೇ ಎಲ್ಲ ವಿಶ್ವವಿದ್ಯಾಲಯಗಳಿಗೆ ಮಾಹಿತಿ ನೀಡಲಾಗಿದ್ದು, ಕಾಲೇಜುಗಳಿಗೆ ಸ್ಪಷ್ಟೀಕರಣ ಬೇಕಾದಲ್ಲಿ ತಮ್ಮ ಸಂಯೋಜಕ ವಿಶ್ವವಿದ್ಯಾಲಯಗಳನ್ನು ಕೇಳಬಹುದಾಗಿದೆ.
13. ಭಾರತದ ಚುನಾವಣಾ ಆಯೋಗವು ದಿನಾಂಕ:02.04.2024ರಂದು ನೀಡಿರುವ ಸಹಮತಿಯ ಮೇರೆಗೆ ಇದನ್ನು ಅನುಷ್ಠಾನಗೊಳಿಸಲಾಗುತ್ತಿದೆ
14. 2024-25ನೇ ಶೈಕ್ಷಣಿಕ ಸಾಲಿನ ಸಂಯೋಜನಾ ಪ್ರಕ್ರಿಯೆಯು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳಿಗೆ ದಿನಾಂಕ 09.05.2024 ರಂದು **UUCMS** ತಂತ್ರಾಂಶದ ಮೂಲಕ ಪ್ರಾರಂಭವಾಗುತ್ತದೆ.

ದಿನಾಂಕ: 08.05.2024
ಸ್ಥಳ: ಬೆಂಗಳೂರು.

(ಕೆ. ವೆಂಕಟೇಶ್ ಬಾಬು)
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)

CamScanner